# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು - 572 103

ದಿನಾಂಕ: 12.12.2025

ಸಂಖ್ಯೆ: ತುವಿ:ಶೈವಿ:2025-26:/2787

## ಸುತ್ತೋಲೆ

**ವಿಷಯ** : ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳು ಶೈಕ್ಷಣಿಕ ಪ್ರವಾಸ ಕೊಳ್ಳುವ ಕಾಲದಲ್ಲಿ ಭಗವದ್ ರಾಮಾನುಜ ರಾಷ್ಟ್ರೀಯ ಸಂಶೋಧನ ಸಂಸತ್, ಮೇಲುಕೋಟೆ, ಸಂಸ್ಥೆಗೆ ಭೇಟಿ ನೀಡುವ ಬಗ್ಗೆ.

**ಉಲ್ಲೇಖ** : ಸಂಖ್ಯೆ: ಇಡಿ 338 ಯುಎನ್‌ಇ 2025, ಬೆಂಗಳೂರು ದಿನಾಂಕ: 20.11.2025

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಶ್ವವಿದ್ಯಾನಿಲಯದ ವಿವಿಧ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳ ಪಠ್ಯಕ್ರಮಗಳಿಗೆ ಸಂಬಂಧಿಸಿದಂತೆ ಶೈಕ್ಷಣಿಕ ಪ್ರವಾಸ ಕೈಗೊಳ್ಳುವ ಹಿನ್ನೆಲೆಯಲ್ಲಿ ಉಲ್ಲೇಖಿತ ಪತ್ರದನ್ವಯ **ಭಗವದ್ ರಾಮಾನುಜ ರಾಷ್ಟ್ರೀಯ ಸಂಶೋಧನಾ ಸಂಸತ್, ಮೇಲುಕೋಟೆ ಸಂಸ್ಥೆ** ಇಲ್ಲಿಗೆ ತೆರಳಿ ಸದರಿ ಸಂಸ್ಥೆಯಲ್ಲಿ ಕೈಗೊಂಡಿರುವ ಸಂಶೋಧನಾ ಕಾರ್ಯಗಳು, ಸಂಗ್ರಹಿಸಿರುವ ಅಪೂರ್ವ ತಾಳಪತ್ರಗಳು ಮತ್ತು ಸಂಗ್ರಹಾಲಯ, ಗ್ರಂಥಾಲಯದ ಅಪೂರ್ವ ಕೃತಿಗಳು ಇತ್ಯಾದಿಗಳ ಕುರಿತು ತಮ್ಮ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸಿಕೊಳ್ಳುವ ಸಲುವಾಗಿ ಸದರಿ ಸಂಸ್ಥೆಗೆ ಭೇಟಿ ನೀಡಲು ಅಗತ್ಯ ಕ್ರಮ ಕೈಗೊಂಡು ಇದರ ಸದುಪಯೋಗ ಮಾಡಿಕೊಳ್ಳಬಹುದೆಂದು ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ತಿಳಿಸಲಾಗಿದ್ದು, ಈ ಸಂಬಂಧ ಎಲ್ಲಾ ಸ್ನಾತಕೋತ್ತರ ವಿಭಾಗಗಳು, ಘಟಕ ಮತ್ತು ಸಂಯೋಜಿತ ಕಾಲೇಜುಗಳು ಅಗತ್ಯ ಕ್ರಮವಹಿಸಲು ತಿಳಿಸಲಾಗಿದೆ.

ಉಪಕುಲಸಚಿವರು
ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

1. ಅಧ್ಯಕ್ಷರು/ಸಂಯೋಜಕರು ಸ್ನಾತಕೋತ್ತರ ಅಧ್ಯಯನ ಕೇಂದ್ರ ಮತ್ತು ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು.
3. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸಂಯೋಜಿತ ಕಾಲೇಜುಗಳು (ಸ್ನಾತಕ ಮತ್ತು ಸ್ನಾತಕೋತ್ತರ) ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

**ಪ್ರತಿಗಳು:**

1. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.-ಇ-ಮೇಲ್ ಮೂಲಕ ಕಳುಹಿಸುವುದು.
2. ಕಛೇರಿ ಪ್ರತಿ.

**ಕರ್ನಾಟಕ ಸರ್ಕಾರ**

ಸಂಖ್ಯೆ: ಇಡಿ 338 ಯುಎನ್ಇ 2025

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ
ಡಾ: ಬಿ.ಆರ್.ಅಂಬೇಡ್ಕರ್ ವೀದಿ
ಬೆಂಗಳೂರು, ದಿನಾಂಕ:20.11.2025

**ಇವರಿಂದ,**

ಸರ್ಕಾರದ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ
ಬೆಂಗಳೂರು-560 001.

**ಇವರಿಗೆ,**

1. ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು.
2. ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು.
3. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
4. ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ, ಶಿವಮೊಗ್ಗ ಜಿಲ್ಲೆ.
5. ಕುಲಸಚಿವರು, ಗುಲ್ಬರ್ಗ ವಿಶ್ವವಿದ್ಯಾಲಯ, ಕಲಬುರಗಿ.
6. ಕುಲಸಚಿವರು, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು.
7. ಕುಲಸಚಿವರು, ತುಮಕೂರು ವಿಶ್ವವಿದ್ಯಾಲಯ, ತುಮಕೂರು.
8. ಕುಲಸಚಿವರು, ಕನ್ನಡ ವಿಶ್ವವಿದ್ಯಾಲಯ, ಹಂಪಿ.
9. ಕುಲಸಚಿವರು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು.
10. ಕುಲಸಚಿವರು, ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ.
11. ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ.
12. ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ.
13. ಕುಲಸಚಿವರು, ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ.
14. ಕುಲಸಚಿವರು, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
15. ಕುಲಸಚಿವರು, ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು
16. ಕುಲಸಚಿವರು, ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು.
17. ಕುಲಸಚಿವರು, ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ, ಶಿಗ್ಗಾವಿ ತಾಲ್ಲೂಕು, ಹಾವೇರಿ ಜಿಲ್ಲೆ.
18. ಕುಲಸಚಿವರು, ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು.
19. ಕುಲಸಚಿವರು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ತಮಕಾ, ಕೋಲಾರ ಜಿಲ್ಲೆ.
20. ಕುಲಸಚಿವರು, ಡಾ.ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ವಿಶ್ವವಿದ್ಯಾಲಯ, ಬೆಂಗಳೂರು.
21. ಕುಲಸಚಿವರು, ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ.
22. ಕುಲಸಚಿವರು, ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು.
23. ಕುಲಸಚಿವರು, ನೃಪತುಂಗ ವಿಶ್ವವಿದ್ಯಾಲಯ, ಬೆಂಗಳೂರು.
24. ಕುಲಸಚಿವರು, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ರಾಯಚೂರು
25. ಕುಲಸಚಿವರು, ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ.
26. ಕುಲಸಚಿವರು, ಚಾಮರಾಜನಗರ ವಿಶ್ವವಿದ್ಯಾಲಯ, ಚಾಮರಾಜನಗರ.
27. ಕುಲಸಚಿವರು, ಹಾಸನ ವಿಶ್ವವಿದ್ಯಾಲಯ, ಹಾಸನ.
28. ಕುಲಸಚಿವರು, ಬೀದರ್ ವಿಶ್ವವಿದ್ಯಾಲಯ, ಬೀದರ್
29. ಕುಲಸಚಿವರು, ಹಾವೇರಿ ವಿಶ್ವವಿದ್ಯಾಲಯ, ಹಾವೇರಿ.
30. ಕುಲಸಚಿವರು, ಬಾಗಲಕೋಟೆ ವಿಶ್ವವಿದ್ಯಾಲಯ, ಬಾಗಲಕೋಟೆ.
31. ಕುಲಸಚಿವರು, ಕೊಡಗು ವಿಶ್ವವಿದ್ಯಾಲಯ, ಕೊಡಗು.
32. ನಿರ್ದೇಶಕರು, ವಿಶ್ವೇಶ್ವರಯ್ಯ ಕಾಲೇಜ್ ಆಫ್ ಇಂಜಿನಿಯರಿಂಗ್ ಬೆಂಗಳೂರು.

...2...

ಮಾನ್ಯರೇ,

ವಿಷಯ: ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳು ಶೈಕ್ಷಣಿಕ ಪ್ರವಾಸ ಕೈಗೊಳ್ಳುವ ಕಾಲದಲ್ಲಿ ಭಗವದ್ ರಾಮಾನುಜ ರಾಷ್ಟ್ರೀಯ ಸಂಶೋಧನ ಸಂಸತ್, ಮೇಲುಕೋಟೆ ಸಂಸ್ಥೆಗೆ ಭೇಟಿ ನೀಡುವಂತೆ ಕೋರಿರುವ ಕುರಿತು.

ಉಲ್ಲೇಖ: ಕುಲಸಚಿವರು (ಆಡಳಿತ), ಭಗವದ್ ರಾಮಾನುಜ ರಾಷ್ಟ್ರೀಯ ಸಂಶೋಧನ ಸಂಸತ್, ಮೇಲುಕೋಟೆ ಇವರ ಕಚೇರಿ ಪತ್ರ ಸಂಖ್ಯೆ:ಭರಾರಾಸಂಸಂ/07/ಹಸ್ತಪ್ರತಿ/2025-26/85 ದಿನಾಂಕ: 20.09.2025.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಪತ್ರದಲ್ಲಿ ಕೋರಲಾಗಿರುವಂತೆ ಭಗವದ್ ರಾಮಾನುಜ ರಾಷ್ಟ್ರೀಯ ಸಂಶೋಧನಾ ಸಂಸತ್ ಈಗಾಗಲೇ ಕೈಗೊಂಡಿರುವ ಸಂಶೋಧನಾ ಕಾರ್ಯಗಳು, ಸಂಗ್ರಹಿಸಿರುವ ಅಪೂರ್ವ ತಾಳಪತ್ರಗಳು ಮತ್ತು ಸಂಗ್ರಹಾಲಯ, ಗ್ರಂಥಾಲಯದ ಅಪೂರ್ವ ಕೃತಿಗಳು ಇತ್ಯಾದಿಗಳನ್ನು ಜನಮಾನಸಕ್ಕೆ ಕೊಂಡೊಯ್ಯುವ ದೃಷ್ಟಿಯಿಂದ ಅದರಲ್ಲೂ ಮುಖ್ಯವಾಗಿ ಉನ್ನತ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಇದನ್ನು ಸದುಪಯೋಗಪಡಿಸಿಕೊಳ್ಳುವುದು ಸೂಕ್ತವಾಗಿರುವುದರಿಂದ ತಮ್ಮ ತಮ್ಮ ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳು ಶೈಕ್ಷಣಿಕ ಪ್ರವಾಸ ಕೈಗೊಳ್ಳುವ ಕಾಲದಲ್ಲಿ ಸದರಿ ಸಂಸ್ಥೆಗೆ ಭೇಟಿ ನೀಡಿ ಸದುಪಯೋಗಪಡಿಸಿಕೊಳ್ಳುವ ಕುರಿತಂತೆ ಅಗತ್ಯ ಕ್ರಮವಹಿಸುವಂತೆ ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಶಶಿಕಲಾ .ಸಿ) 20/11/24

ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯ-1)

**<u>ಪ್ರತಿಯನ್ನು ಮಾಹಿತಿಗಾಗಿ:</u>** ಕುಲಸಚಿವರು (ಆಡಳಿತ), ಭಗವದ್ ರಾಮಾನುಜ ರಾಷ್ಟ್ರೀಯ ಸಂಶೋಧನ ಸಂಸತ್, ಮೇಲುಕೋಟೆ

# ಭಗವದ್ ರಾಮಾನುಜ ರಾಷ್ಟ್ರೀಯ ಸಂಶೋಧನ ಸಂಸತ್
[ಅಧೀನ : ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ]

**ಮೇಲುಕೋಟೆ - 571 431, ಮಂಡ್ಯ ಜಿಲ್ಲೆ, ಕರ್ನಾಟಕ**

Ph. : (08236) 295611. E-mail : asroffice1976@gmail.com. Website : https://brnrimelkote.karnataka.gov.in


ಭರಾರಾಸಂಸಂ/07/ಹಸ್ತಪ್ರತಿ/2025-26/೩೯ ದಿನಾಂಕ : 20.09.2025

ಇವರಿಗೆ,

ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಉನ್ನತ ಶಿಕ್ಷಣ ಇಲಾಖೆ,
ಬಹುಮಹಡಿ ಕಟ್ಟಡ, ಬೆಂಗಳೂರು.

ಮಾನ್ಯರೇ,

ವಿಷಯ : ತಮ್ಮ ವ್ಯಾಪ್ತಿಯಲ್ಲಿ ಬರುವ ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳು ಶೈಕ್ಷಣಿಕ ಪ್ರವಾಸ ಕಾಲದಲ್ಲಿ ಮೇಲುಕೋಟೆಯ ಭಗವದ್ ರಾಮಾನುಜ ರಾಷ್ಟ್ರೀಯ ಸಂಶೋಧನ ಸಂಸತ್‌ಗೆ ಭೇಟಿ ಕೊಡಲು ಅನುಮೋದನೆ ನೀಡುವ ಕುರಿತು.

ಉಲ್ಲೇಖ :
1. 7ನೇಯ ಸಂಶೋಧನ ಸಲಹಾ ಸಮಿತಿ ಸಭೆಯ ವಿಷಯ (14)ರ ನಿರ್ಣಯದಂತೆ.
2. 8ನೇಯ ಆಡಳಿತ ಸಮಿತಿ ಸಭೆಯ ವಿಷಯ (19)ರ ನಿರ್ಣಯದಂತೆ.
3. ಮಾನ್ಯ ಕುಲಪತಿಗಳ ಕಂಡಿಕೆ (05), ದಿನಾಂಕ : 18.09.2025.

---

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳಿಗೆ ಸಂಬಂಧಿಸಿದಂತೆ, ಸ.ಆ.ಸಂ. ಆರಾಡಿ 136 ಎಂಇಟಿ 1976, ದಿನಾಂಕ : 15.10.1976ರಲ್ಲಿ ಮೇಲುಕೋಟೆಯಲ್ಲಿ ಭಗವದ್ ರಾಮಾನುಜ ರಾಷ್ಟ್ರೀಯ ಸಂಶೋಧನ ಸಂಸತ್‌ನ್ನು ಸ್ಥಾಪಿಸಿದೆ. ಸಂಸ್ಥೆಯು ಕರ್ನಾಟಕ ಸರ್ಕಾರದ ಪೂರ್ಣ ಅನುದಾನಕ್ಕೊಳಪಟ್ಟ ಸ್ವಾಯತ್ತ ಸಂಸ್ಥೆಯಾಗಿದ್ದು, ಪ್ರಸ್ತುತ ಸರ್ಕಾರದ ಆದೇಶದಂತೆ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಅಧೀನಕ್ಕೊಳಪಟ್ಟಿದೆ. ಸಂಸ್ಥೆಯ ಮೂಲಧ್ಯೇಯೋದ್ದೇಶವು ಭಗವದ್ ರಾಮಾನುಜರ ವಿಚಾರಧಾರೆಯನ್ನು ಪ್ರಚುರಪಡಿಸುವ, ಪ್ರಾಚೀನ ತಾಳೆಪತ್ರಗಳು ಹಾಗೂ ಹಸ್ತಪ್ರತಿಗಳು ಮತ್ತು ಗ್ರಂಥಗಳನ್ನು ಸಂಶೋಧನೆಗಾಗಿ ಸಂಗ್ರಹಿಸಿ ತನ್ಮೂಲಕ ಪ್ರಕಟಣೆ ಕಾರ್ಯವನ್ನು ಕೈಗೊಳ್ಳುತ್ತಾ ರಾಷ್ಟ್ರಮಟ್ಟದಲ್ಲಿ ತನ್ನದೇ ಆದ ಸ್ಥಾನವನ್ನು ಪಡೆದಿದೆ. ಈ ಸಂಸ್ಥೆಯು ಸಂಶೋಧನೆಗೆ ಬೇಕಾದ ಸುಮಾರು 10 ಸಾವಿರಕ್ಕೂ ಮಿಗಿಲಾಗಿ ಪ್ರಾಚೀನ ತಾಳೆಪತ್ರಗಳು ಮತ್ತು ಹಸ್ತಪ್ರತಿಗಳನ್ನು ಹಾಗೂ ಗ್ರಂಥಾಲಯದಲ್ಲಿ 33 ಸಾವಿರಕ್ಕೂ ಅಧಿಕ ಕೃತಿಗಳನ್ನು ಸಂಗ್ರಹಿಸಿ, ಸಂರಕ್ಷಿಸಿ, ಸಂಶೋಧನೆಗೆ ಪೂರಕವಾದ ವಾತಾವರಣವನ್ನು ಸೃಷ್ಟಿ ಮಾಡಿದೆ. ಇದರೊಡನೆ ಸಂಸ್ಥೆಯು 222ಕ್ಕೂ ಅಧಿಕ ಸಂಶೋಧನ ಕೃತಿಗಳನ್ನು ಹೊರತಂದಿದೆ. ಆಗಿಂದ್ದಾಗ್ಗೆ ರಾಷ್ಟ್ರಮಟ್ಟದ ವಿಚಾರಸಂಕಿರಣ, ಕಮ್ಮಟಗಳು, ಕಾರ್ಯಾಗಾರ, ವಿದ್ವದ್ಗೋಷ್ಠಿ ಮತ್ತು ಸಂಸ್ಕೃತ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಸ್ಪರ್ಧೆಗಳನ್ನು ಹಾಗೂ ಉಪನ್ಯಾಸಗಳನ್ನು ಆಗಿಂದ್ದಾಗ್ಗೆ ಯಶಸ್ವಿಯಾಗಿ ಏರ್ಪಡಿಸುತ್ತಾ ಬಂದಿದೆ.

ಸರ್ಕಾರವು ಈ ಸಂಸ್ಥೆಯನ್ನು ಪ್ರಾರಂಭಿಸಿದ್ದು, ಬರುವ 2026ನೇ ಸಾಲಿನಲ್ಲಿ 50ನೇ ವರ್ಷಕ್ಕೆ ಕಾಲಿಡುತ್ತಿರುವ ಈ ಸಂದರ್ಭದಲ್ಲಿ ಸಂಸ್ಥೆಯು ಈಗಾಗಲೇ ಕೈಗೊಂಡಿರುವ ಸಂಶೋಧನ ಕಾರ್ಯಗಳು, ಸಂಗ್ರಹಿಸಿರುವ ಅಪೂರ್ವ ತಾಳೆಪತ್ರಗಳು ಮತ್ತು ಸಂಗ್ರಹಾಲಯ, ಗ್ರಂಥಾಲಯದ ಅಪೂರ್ವ ಕೃತಿಗಳು ಇತ್ಯಾದಿಗಳನ್ನು ಜನಮಾನಸಕ್ಕೆ ಕೊಂಡೊಯ್ಯುವ ದೃಷ್ಟಿಯಿಂದ ಅದರಲ್ಲೂ ಮುಖ್ಯವಾಗಿ ಉನ್ನತ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಇದನ್ನು ಸದುಪಯೋಗಪಡಿಸಿಕೊಳ್ಳಬೇಕಿದೆ. ಈ ದೃಷ್ಟಿಯಿಂದ ಪ್ರತೀ ವರ್ಷ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳು

ಶೈಕ್ಷಣಿಕ ಪ್ರವಾಸ ಕೈಗೊಳ್ಳುವ ಕಾಲದಲ್ಲಿ ಈ ಸಂಸ್ಥೆಗೆ ಭೇಟಿ ನೀಡಿ ಸದುಪಯೋಗಪಡಿಸಿಕೊಳ್ಳುವ ಕುರಿತು ಸರ್ಕಾರದಿಂದ ಸೂಕ್ತ ಆದೇಶ ಕೋರಿ ತಮ್ಮಲ್ಲಿ ಆತ್ಮೀಯವಾಗಿ ಪ್ರಾರ್ಥಿಸಿದೆ.

ಗೌರವಪೂರ್ವಕ ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

[illegible] (ಪ್ರಭಾರ)
[illegible]
[ಕೇಂದ್ರ : ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ]
ಮೇಲುಕೋಟೆ-571431

20/9/25

ಅಡಕ : ಮೇಲಿನಂತೆ.